ಈ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಡೈರಿಗಳನ್ನು ಸ್ಥಾಪಿಸಲಾಗುವುದು

ಉ) ಇದಕ್ಕಾಗಿ ಕೇಂದ್ರ ಸರ್ಕಾರದಿಂದ ಹಣಕಾಸಿನ ನೆರವಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ,

ಊ) ಹಾಗಿದ್ದಲ್ಲಿ, ಎಷ್ಟು ಮೊತ್ತದ ಹಣಕಾಸಿನ ನೆರವನ್ನು ಕೇಳಲಾಗಿದೆ ಹಾಗೂ ಇದಕ್ಕೆ ಕೇಂದ್ರದ ಪ್ರತಿಕ್ರಿಯೆ ಏನು

ಋ) ಬೀದರ್‌ನಲ್ಲಿ ಈಗಿರುವ ಸಣ್ಣ ಡೈರಿಯನ್ನು ಪೂರ್ಣ ಪ್ರಮಾಣದಲ್ಲಿ ಮೇಲ್ದರ್ಜೆಗೆ ಏರಿಸುವ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಮದರ್ ಡೈರಿ, ಬೆಂಗಳೂರು, ದಿನವಹಿ 6 ಲಕ್ಷ ಲೀಟರ್‌ಗಳು

ಆ) ಹೌದು, ಬೆಂಗಳೂರಿನಲ್ಲಿ ಮಾತ್ರ ಮೆಗಾ ಡೈರಿ ಕಾರ್ಯನಿರ್ವಹಿಸುತ್ತಿದೆ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಉ) ಇಲ್ಲ

ಊ) ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ

ಋ) ಈ ರೀತಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ

462(744) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನಗಳಿಗೆ ಉತ್ತರಿಸುವರೆ ?

ಅ) ಬೀದರ್ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶವನ್ನು ಜಲಾನಯನ ಪ್ರದೇಶಗಳೆಂದು ಗುರುತಿಸಲಾಗಿರುವುದು (ತಾಲ್ಲೂಕುವಾರು ಅಂಕಿ ಅಂಶಗಳನ್ನು ಒದಗಿಸುವುದು)

ಆ) ಈ ಪ್ರದೇಶವನ್ನು ಅಭಿವೃದ್ಧಿಪಡಿಸಲು ಹಾಕಿಕೊಂಡಿರುವ ಕಾರ್ಯ ಕ್ರಮಗಳೇನು?

ಇ) ಜಿಲ್ಲೆಯ ಯಾವ ಯಾವ ಜಲಾನಯನ ಪ್ರದೇಶಗಳನ್ನು ವಿಶ್ವಬ್ಯಾಂಕ್ ನೆರವಿನ ಸುಜಲಾ ಜಲಾನಯನ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಸೇರಿಸಲಾಗಿದೆ

ಈ) ಜಿಲ್ಲೆಯ ಜಲಾನಯನ ಪ್ರದೇಶ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಕಳೆದ 3 ವರ್ಷಗಳಿಂದ ಪ್ರತಿ ವರ್ಷ ಖರ್ಚು ಮಾಡಿರುವ ಹಣದ ಮೊತ್ತವೆಷ್ಟು? (ತಾಲ್ಲೂಕುವಾರು ಅಂಕಿ ಅಂಶಗಳನ್ನು ಒದಗಿಸುವುದು)

ಉ) ಪ್ರಸಕ್ತ ವರ್ಷದ ಆಯವ್ಯಯದಲ್ಲಿ ಬೀದರ್ ಜಿಲ್ಲೆಗೆ ಜಲಾನಯನ ಪ್ರದೇಶ ಅಭಿವೃದ್ಧಿಗಾಗಿ ಎಷ್ಟು ಹಣ ಖರ್ಚು ಮಾಡಲಾಗುವುದು?

ಶ್ರೀ ಕೆ ಶ್ರೀನಿವಾಸಗೌಡ (ಕೃಷಿ ಸಚಿವರು)

ಅ) ಬೀದರ್ ಜಿಲ್ಲೆಯಲ್ಲಿ ಜಲಾನಯನ ಅಭಿವೃದ್ಧಿಗೆ ಲಭ್ಯವಿರುವ 334184 ಹೆಕ್ಟೇರ್ ಪ್ರದೇಶದ ಪೈಕಿ 217345 ಹೆಕ್ಟೇರ್ ಪ್ರದೇಶವನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿದ್ದು ಉಳಿದ 116839 ಹೆಕ್ಟೇರ್ ಪ್ರದೇಶವನ್ನು ಅಭಿವೃದ್ಧಿಪಡಿಸಬೇಕಾಗಿದೆ ಇದರ ತಾಲ್ಲೂಕುವಾರು ವಿವರಗಳನ್ನು ಕೆಳಗೆ ನೀಡಲಾಗಿದೆ

(ಹೆ ಗಳಲ್ಲಿ)

ಕ್ರ ಸಂ	ತಾಲ್ಲೂಕು	ಒಟ್ಟು ಭೌಗೋಳಿಕ ವಿಸ್ತೀರ್ಣ	ಜಲಾನಯನ ಅಭಿವೃದ್ಧಿಗೆ ಲಭ್ಯವಿರುವ ಪ್ರದೇಶ	ಪ್ರಾರಂಭದಿಂದ ವಿವಿಧ ಯೋಜನೆಗಳಲ್ಲಿ ಅಭಿವೃದ್ಧಿಪಡಿಸಿದ ಪ್ರದೇಶ (31 03 04ರ ವರೆಗೆ)	ಜಲಾನಯನ ಅಭಿವೃದ್ಧಿಗೆ ಬಾಕಿ ಇರುವ ಪ್ರದೇಶ
1	ಔರಾದ	121622	91373	65707	25666
2	ಬಸವಕಲ್ಯಾಣ	119438	83880	38730	45150
3	ಭಾಲ್ಕಿ	109259	49978	36616	13362
4	ಬೀದರ್	92203	57010	37540	19470
5	ಹುಮ್ನಾಬಾದ್	99243	51943	38752	13191
	ಒಟ್ಟು	541765	334184	217345	116839

ಆ) ಈ ಪ್ರದೇಶವನ್ನು ರಾಜ್ಯವಲಯ ಯೋಜನೆಯಾದ ರಾಷ್ಟ್ರೀಯ ಜಲಾನಯನ ಅಭಿವೃದ್ಧಿ ಯೋಜನೆ, ಹಾಗೂ ಜಿಲ್ಲಾ ವಲಯ ಯೋಜನೆಗಳಾದ ಹರಿಯಾಲಿ, ಸಂಪೂರ್ಣ ಗ್ರಾಮೀಣ ರೋಜ್ ಗಾರ್ ಯೋಜನೆ, ಸಮಗ್ರ ಬಂಜರು ಭೂಮಿ ಅಭಿವೃದ್ಧಿ ಯೋಜನೆ ಮತ್ತು ಬರಪೀಡಿತ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ

ಇ) ವಿಶ್ವಬ್ಯಾಂಕ್ ನೆರವಿನ ಸುಜಲಾ ಜಲಾನಯನ ಯೋಜನೆಯು ಬೀದರ್ ಜಿಲ್ಲೆಯಲ್ಲಿ ಜಾರಿಯಲ್ಲಿರುವುದು

ಈ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಜಲಾನಯನ ಅಭಿವೃದ್ಧಿಗಾಗಿ ಮೆಚ್ಚ ಮಾಡಲಾಗಿರುವ ಅನುದಾನದ ತಾಲ್ಲೂಕುವಾರು ವಿವರಗಳನ್ನು ಕೆಳಗೆ ನೀಡಲಾಗಿದೆ

ಲಕ್ಷಗಳಲ್ಲಿ

	01–02	02–03	03–04
ಔರಾದ್	48 76	214 90	37 821
ಬಸವಕಲ್ಯಾಣ	51 24	56 52	48 162
ಭಾಲ್ಕಿ	51 25	58 07	39 751
ಬೀದರ್	21 88	52 27	47 842
ಹುಮ್ನಾಬಾದ್	73 77	37 52	29 414
ಒಟ್ಟು	246 87	419 28	202 990

ಉ) ಬೀದರ್ ಜಿಲ್ಲೆಯ ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ 2004–05ನೇ ಸಾಲಿನಲ್ಲಿ 204 770 ಲಕ್ಷ ರೂ ಗಳನ್ನು ಖರ್ಚು ಮಾಡಲು ಉದ್ದೇಶಿಸಲಾಗಿದೆ

466(548) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?